ನೀರಿನ ಸರಬರಾಜಿಲ್ಲದೇ ಸಮಸ್ಯೆಗೆ ಸಿಲುಕಿದ ಹೋಟೆಲ್ ಮಾಲೀಕರು

ಬೆಂಗಳೂರು: ನಗರದಲ್ಲಿ ನೀರಿನ ಕೊರತೆಯಿಂದ ನೀರು ಸರಬರಾಜಿಲ್ಲದೆ ಹೋಟೆಲ್‌ಗಳು ಸಮಸ್ಯೆಯನ್ನು ಅನುಭವಿಸುತ್ತಿದ್ದು, ಟ್ಯಾಂಕರ್‌ಗಳನ್ನು ಬುಕ್ ಮಾಡಿದರೂ ತಕ್ಷಣಕ್ಕೆ ನೀರು ಸಿಗದೇ ಹೋಟೆಲ್ ಮಾಲೀಕರು ಪರಿತಪಿಸುವಂತಾಗಿದೆ.

ನಗರದಲ್ಲಿ ಹೋಟೆಲ್‌ಗಳು ಅತಿ ಹೆಚ್ಚು ನೀರನ್ನು ಬಳಕೆ ಮಾಡುತ್ತಿದ್ದು, ಬಹುತೇಕ ಹೋಟೆಲ್‌ಗಳಲ್ಲಿ ಬೋರ್‌ವೆಲ್‌ಗಳ ಸೌಲಭ್ಯವಿಲ್ಲ. ಇಂತಹ ಕಡೆ ನೀರಿನ ಸಮಸ್ಯೆ ಹೆಚ್ಚಾಗಿರುವುದರಿಂದ ಮಾಲೀಕರು ಸಮಸ್ಯೆಗೊಳಗಾಗುತ್ತಿದ್ದಾರೆ. ಪಾಲಿಕೆ ಮತ್ತು ಜಲಮಂಡಳಿ ಸಮರೋಪಾದಿಯಲ್ಲಿ ಟ್ಯಾಂಕರ್‌ಗಳನ್ನು ವಶಕ್ಕೆ ಪಡೆದು, ಬೋರ್‌ಗಳನ್ನು ಕೊರೆಸಿ ಮನೆ ಮನೆಗೆ ನೀರನ್ನು ತಲುಪಿಸುವ ಕಾರ್ಯ ಮಾಡುತ್ತಿದೆ. ಆದರೆ ಹೋಟೆಲ್‌ಗಳಿಗೆ ನೀರನ್ನು ತಲುಪಿಸಲು ಅಧಿಕಾರಿಗಳು ಅಸಡ್ಡೆ ವಹಿಸುತ್ತಿದ್ದಾರೆ. ಸಾವಿರಾರು ಜನರು ಬೆಂಗಳೂರಿನ ಹೋಟೆಲ್ ಗಳ ತಿಂಡಿ ತಿನುಸುಗಳ ಮೇಲೆ ಅವಲಂಬಿತರಾಗಿರುವ ಕಾರಣ ಮುಂದಿನ ದಿನಗಳಲ್ಲಿ ಗ್ರಾಹಕರಿಗೂ ಸಮಸ್ಯೆಯಾಗಲಿದೆ ಎನ್ನುವ ಮಾತುಗಳು ಕೇಳಿ ಬರುತ್ತಿದೆ.

ನೀರು ಉಳಿಸಲು ಯೋಜನೆ

ಬೆಂಗಳೂರು ಹೋಟೆಲ್ ಅಸೋಸಿಯೇಷನ್ ಅಧ್ಯಕ್ಷ ಪಿ.ಸಿ. ರಾವ್ ಮಾತನಾಡಿ, ಶೇ.20 ರಷ್ಟು ನೀರನ್ನು ಉಳಿಸಲು ಸಾಕಷ್ಟು ಯೋಜನೆಗಳನ್ನು ನಗರದ ಹೋಟೆಲ್‌ಗಳು ಹಮ್ಮಿಕೊಂಡಿವೆ. ನೀರು ಪೋಲಾಗುವುದನ್ನು ನಿಲ್ಲಿಸಲು ಸಹ ಹೇಳಿದ್ದೇವೆ. ನೀರಿನ ಸರಬರಾಜು ಕೊರತೆ ಎದ್ದು ಕಾಣುತ್ತಿದೆ. ಸರಕಾರ ನೀರನ್ನು ಕೊಡಲು ಪ್ರಾರಂಭಿಸಿದ್ದು ಅದರ ಸಾಧಕ ಬಾಧಕಗಳನ್ನು ವಿಶ್ಲೇಷಿಸಿ ಮುಂದಿನ ಯೋಜನೆಯನ್ನು ರೂಪಿಸಲಿದ್ದೇವೆ ಎಂದಿದ್ದಾರೆ.

ಮಾಜಿ ಐಎಎಸ್, ಐಪಿಎಸ್, ಐಆರ್‌ಎಸ್ ಅಧಿಕಾರಿಗಳಿಂದ ಪತ್ರ

ನಾಸೀರ್‌ಗೆ ಪ್ರಮಾಣ ವಚನ ಬೋಧಿಸಬೇಡಿ

ಬೆಂಗಳೂರು: ರಾಜ್ಯಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಸೈಯದ್ ನಾಸೀರ್ ಹುಸೇನ್ ಅವರಿಗೆ ರಾಜ್ಯಸಭಾ ಸದಸ್ಯ ಸ್ಥಾನಕ್ಕೆ ಪ್ರಮಾಣ ವಚನ ಬೋಧಿಸಬಾರದು ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರಿಗೆ ಮಾಜಿ ಐಎಎಸ್, ಐಪಿಎಸ್, ಐಆರ್‌ಎಸ್ ಅಧಿಕಾರಿಗಳು ಪತ್ರ ಬರೆದಿದ್ದಾರೆ.

ರಾಜ್ಯದಲ್ಲಿ ಭಾರಿ ವಿವಾದಕ್ಕೆ ಕಾರಣವಾಗಿರುವ ಪಾಕಿಸ್ತಾನ್ ಜಿಂದಾಬಾದ್ ಘೋಷಣೆಯನ್ನು ನಾಸೀರ್ ಹುಸೇನ್ ಅವರ ಗೆಲುವಿನ ಸಂಭ್ರಮಾಚರಣೆ ವೇಳೆ ಕೂಗಲಾಗಿದೆ. ಪ್ರಜಾಪ್ರಭುತ್ವದ ದೇಗುಲ ಎನಿಸಿರುವ ವಿಧಾನಸೌಧದಲ್ಲಿ ಈ ಘಟನೆ ನಡೆದಿರುವುದು ಆಘಾತ ತಂದಿದೆ. ನಾಸೀರ್ ಅವರು ಈ ಘಟನೆಯಾಗಾದ ಯಾವುದೇ ವಿರೋಧ ತೋರುವ ಬದಲಿಗೆ ಮಾಧ್ಯಮದವರ ಮೇಲೆ ಕೂಗಾಡಿರುವ ಘಟನೆ ನಡೆದಿದೆ. ಆದ್ದರಿಂದ ಈ ಪ್ರಕರಣ ವಿಚಾರಣೆ ಇತ್ಯರ್ಥವಾಗುವ ತನಕ ಅವರಿಗೆ ಪ್ರಮಾಣ ವಚನ ಬೋಧಿಸಬಾರದು ಎಂದು ಮನವಿ ಮಾಡಿದ್ದಾರೆ.

ರಾಜ್ಯಸಭೆ ಎನ್ನುವುದು ಚಿಂತಕರ ಚಾವಡಿ ಹಾಗೂ ಸಂವಿಧಾನದಲ್ಲಿ ಅತಿಹೆಚ್ಚು ಗೌರವಕ್ಕೆ ಪಾತ್ರವಾಗಿರುವ ಸದನವಾಗಿದೆ. ಇಂತಹ ಆರೋಪದ ವಿಚಾರಣೆ ನಡೆಯುವ ಸಮಯದಲ್ಲಿ ಈ ಪ್ರಕರಣ ಕೇಂದ್ರಬಿಂದುವಾಗಿರುವ ನಾಸೀರ್ ಅವರಿಗೆ ಪ್ರಮಾಣ ಪತ್ರ ಬೋಧಿಸುವುದು ಶೋಭೆ ತರುವುದಿಲ್ಲ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಉಪರಾಷ್ಟ್ರಪತಿ ಧನಕರ್ ಅವರಿಗೆ ಬರೆದಿರುವ ಪತ್ರಕ್ಕೆ ನಿವೃತ್ತ ಐಎಎಸ್ ಅಧಿಕಾರಿಗಳಾದ ಕೆ. ಶ್ರೀಧರ್ ರಾವ್, ಎಸ್.ಎಲ್.ಗಂಗಾಧರಪ್ಪ, ಎಂ.ಮದನ್‌ಗೋಪಾಲ್, ಎಲ್.ಲಕ್ಷ್ಮೀನಾರಾಯಣ ಹಾಗೂ ಐಪಿಎಸ್ ಅಧಿಕಾರಿಗಳಾದ ಗೋಪಾಲ್ ಹೊಸೂರು, ಜಿ.ವಿ.ಸುಗುರ್, ಡಾ.ಆರ್.ರಾಜು ಸೇರಿ ಸುಮಾರು 20 ಮಾಜಿ ಐಎಎಸ್, ಐಪಿಎಸ್ ಹಾಗೂ ಐಆರ್‌ಎಸ್ ಅಧಿಕಾರಿಗಳು ಸಹಿ ಹಾಕಿದ್ದಾರೆ.

ನಗರದಲ್ಲಿ ನೀರಿನ ಅಭಾವ: ಆರ್‌ಓ ಘಟಕಗಳಲ್ಲಿ ಒಬ್ಬರಿಗೊಂದೇ ಕ್ಯಾನ್

ಬೆಂಗಳೂರು: ನಗರದಲ್ಲಿ ನೀರಿನ ಅಭಾವದಿಂದಾಗಿ ಹಲವು ಕಡೆಗಳಲ್ಲಿ ಕುಡಿಯುವ ನೀರಿನ ಘಟಕಗಳು ಬಂದ್ ಆಗುತ್ತಿದ್ದು, ಕೆಲವು ಕಡೆಗಳಲ್ಲಿ ಒಬ್ಬರಿಗೊಂದೇ ಕ್ಯಾನ್ ನೀರು ಎನ್ನುವ ನಿಯಮ ಅನ್ವಯವಾಗುತ್ತಿದೆ.

ಬೇಸಿಗೆ ಆರಂಭದಲ್ಲೇ ನಗರದ ಹಲವು ಕೊಳವೆ ಬಾವಿಗಳು ಬರಿದಾಗಿದ್ದು, ಕಾವೇರಿ ನೀರು ಸರಿಯಾಗಿ ಬರುತ್ತಿಲ್ಲ ಇದರಿಂದ ಜನರು ನೀರಿಗಾಗಿ ಪರದಾಡುತ್ತಿದ್ದಾರೆ. ಖಾಸಗಿ ಟ್ಯಾಂಕರ್ ನೀರಿನ ಮೊರೆ ಹೋಗಿದ್ದಾರೆ. ಆದರೆ ಟ್ಯಾಂಕರ್ ನೀರಿನ ಬೆಲೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಹಿನ್ನೆಲೆ ಕುಡಿಯುವ ನೀರಿಗಾಗಿ ಜನರು ಆರ್‌ಓ ಶುದ್ಧ ನೀರಿನ ಘಟಕವನ್ನು ಅವಲಂಬಿಸಿದ್ದು, ಈಗ ಆರ್‌ಓ ಘಟಕಗಳಲ್ಲಿಯೂ ನೀರಿನ ಕೊರತೆ ಹೆಚ್ಚಾಗಿದೆ. ಹೀಗಾಗಿ ಎಲ್ಲರಿಗೂ ನೀರು ಕೊಡಬೇಕಾಗಿರುವುದರಿಂದ ಒಬ್ಬರಿಗೆ ಒಂದೇ ಕ್ಯಾನ್ ನೀರು ಮಾತ್ರ ಎನ್ನುವ ಹೊಸ ನಿಯಮ ಆರಂಭವಾಗಿದೆ. ನಗರದ ಹಲವೆಡೆ ಅದರಲ್ಲೂ ಆರ್‌ಆರ್ ನಗರದ ಆರ್‌ಓ ಪ್ಲಾಂಟ್ ನಲ್ಲಿ ಈ ಬೋರ್ಡ್ ಹಾಕಿರುವುದು ಕಂಡು ಬರುತ್ತಿದೆ.

ನೀರಿನ ಕೊರತೆಯಿಂದ ಬೆಂಗಳೂರು ನಗರದಲ್ಲಿನ ಅನೇಕ ಆರ್‌ಓ ಘಟಕಗಳು ಮುಚ್ಚಿದ್ದು, ಕೆಲವು ಮುಚ್ಚುವ ಹಂತದಲ್ಲಿದೆ. ಇನ್ನೂ ಕೆಲವು ಆರ್‌ಓ ಘಟಕಗಳಲ್ಲಿ ಹೆಚ್ಚುತ್ತಿರುವ ವಿದ್ಯುತ್ ಮತ್ತು ನೀರಿನ ವೆಚ್ಚವನ್ನು ನಿರ್ವಹಿಸಲು 20 ಲೀಟರ್ ಕುಡಿಯುವ ನೀರಿನ ಬೆಲೆಯನ್ನು ದುಪ್ಪಟ್ಟು ಮಾಡಲಾಗಿದೆ. ಯಶವಂತಪುರ, ಆರ್.ಆರ್.ನಗರ ಮತ್ತು ಕೆಂಗೇರಿ ಭಾಗದಲ್ಲಿ ಬೋರ್‌ವೆಲ್‌ನಲ್ಲಿ ನೀರಿನ ಮಟ್ಟ ತಗ್ಗಿದ್ದು, ಯಶವಂತಪುರದಲ್ಲಿ ಕಳೆದ ತಿಂಗಳಲ್ಲಿ 15ಕ್ಕೂ ಹೆಚ್ಚು ಆರ್‌ಓ ಘಟಕಗಳನ್ನು ಮುಚ್ಚಲಾಗಿದೆ.

ಸಮಾಚಾರ ಸಣ್ಣದಲ್ಲ

ಸ್ವಯಂಚಾಲಿತ ಟಿಕೆಟ್ ಕೌಂಟರ್ ಸಿದ್ಧ ಶೀಘ್ರ

ಬೆಂಗಳೂರು: ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಲ್ಲಿ ಅಳವಡಿಸಿರುವ ಸ್ವಯಂಚಾಲಿತ ಟಿಕೆಟ್ ಯಂತ್ರಗಳಲ್ಲಿ ಕೇವಲ ಒಂದು ಯಂತ್ರ ದುರಸ್ಥಿಯಲ್ಲಿದ್ದು ಶೀಘ್ರದಲ್ಲಿಯೇ ಇದನ್ನು ಸರಿಪಡಿಸಲಾಗುವುದು ಎಂದು ನೈರುತ್ಯ ರೈಲ್ವೇ ಸ್ಪಷ್ಟಪಡಿಸಿದೆ. ವಿಶ್ವವಾಣಿ ಪ್ರಕಟಿಸಿದ 'ನಿರ್ವಹಣೆಯಿಲ್ಲದೇ ಕೆಟ್ಟು ನಿಂತ ರೈಲ್ವೇ ಟಿಕೆಟ್ ವಿತರಣಾ ಯಂತ್ರ' ಎನ್ನುವ ವಿಶೇಷ ವರದಿಗೆ ಪ್ರತಿಕ್ರಿಯಿಸಿರುವ ರೈಲ್ವೇ ಇಲಾಖೆ, ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಲ್ಲಿ ಒಟ್ಟು ಒಂಬತ್ತು ಸ್ವಯಂಚಾಲಿತ ಟಿಕೆಟ್ ಯಂತ್ರಗಳಿದ್ದು, ಇದರಲ್ಲಿ ಎಂಟು ಕಾರ್ಯನಿರ್ವಹಿಸುತ್ತಿವೆ. ಒಂದು ಯಂತ್ರದ ಪ್ರಿಂಟಿಂಗ್ ಸಮಸ್ಯೆಯಿಂದ ದುರಸ್ಥಿಗೆ ಬಂದಿದೆ. ಈ ಯಂತ್ರವನ್ನು ಶೀಘ್ರದಲ್ಲಿಯೇ ಸರಿಪಡಿಸಿ ಪ್ರಯಾಣಿಕರ ಬಳಕೆಗೆ ಮುಕ್ತಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದೆ. ಸ್ವಯಂಚಾಲಿತ ಟಿಕೆಟ್ ಯಂತ್ರಗಳಲ್ಲಿ ನಿತ್ಯ ಏಳರಿಂದ ಎಂಟು ಸಾವಿರ ಟಿಕೆಟ್‌ಗಳು ವಿತರಣೆಯಾಗುತ್ತಿದೆ. ಯಂತ್ರಗಳ ಕಾರ್ಯನಿರ್ವಹಣೆ ಬಗ್ಗೆ ಮತ್ತೊಮ್ಮೆ ಪರಿಶೀಲಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಾಂಡಪ್ಪ ಹೂಗಾರ ದತ್ತಿ ಪ್ರಶಸ್ತಿ ಪ್ರಕಟ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನೀಡಲಾಗುವ ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿಯನ್ನು ಪ್ರಕಟಿಸಿದ್ದು, ಇಬ್ಬರನ್ನು ಆಯ್ಕೆ ಮಾಡಲಾಗಿದೆ ಎಂದು ಕಸಾಪ ಅಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಹೇಳಿದರು. 2023ನೇಯ ಸಾಲಿನ ಕನ್ನಡ ಸಾಹಿತ್ಯ ಪರಿಷತ್ತಿನ ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿಗೆ ಹಿರಿಯ ಸಾಧಕರಾದ ಬೀದರ್ ಅಕ್ಕ ಡಾ.ಅನ್ನಪೂರ್ಣ ತಾಯಿ ಮತ್ತು ಬೆಳಗಾವಿಯ ವಿನೋದ ಸುರೇಂದ್ರರನ್ನು ಆಯ್ಕೆ ಮಾಡಲಾಗಿದೆ. ಆಯ್ಕೆ ಸಮಿತಿಯಲ್ಲಿ ಕಸಾಪ ಅಧ್ಯಕ್ಷ ನಾಡೋಜ ಡಾ ಮಹೇಶ್ ಜೋಶಿ, ಕಾರ್ಯದರ್ಶಿ ಡಾ.ಪದ್ಮಿನಿ ನಾಗರಾಜು, ಕೋಶಾಧ್ಯಕ್ಷ ಬಿ.ಎಂ.ಪಟೇಲ್ ಪಾಂಡು ಮತ್ತು ದತ್ತಿ ದಾನಿಗಳ ಪರವಾಗಿ ನಾಡೋಜ ಡಾ.ಮನು ಬಳಿಗಾರ್ ಇದ್ದರು.

ಪರಿಷತ್ತಿನ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತು ಕರ್ನಾಟಕ ಎಂಬ ಹೆಸರಿನ ಸುವರ್ಣ ಸಂಭ್ರಮದ ಈ ಸಂದರ್ಭದಲ್ಲಿ ಐವತ್ತು ಮಹತ್ವದ ಪ್ರಶಸ್ತಿಗಳನ್ನು ಕನ್ನಡ ಸಾಹಿತ್ಯ ಪರಿಷತ್ತು ನೀಡಲು ತಾತ್ಕಿಕವಾಗಿ ನಿರ್ಧರಿಸಿದೆ ಎಂದು ಕಸಾಪ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕನ್ನಡ-ಕನ್ನಡಿಗ- ಕರ್ನಾಟಕ ಇವುಗಳ ಹಿರಿಮೆಗೆ ಅದರಲ್ಲಿಯೂ ಮುಖ್ಯವಾಗಿ ಕರ್ನಾಟಕದ ಏಕೀಕರಣಕ್ಕೆ ಹಾಗೂ ನಾಮಕರಣಕ್ಕೆ ದುಡಿದ 50 ವ್ಯಕ್ತಿ-ಸಂಘಸಂಸ್ಥೆಗಳನ್ನು ಗುರುತಿಸಿ ಈ ಪುರಸ್ಕಾರ ನೀಡಲಾಗುವುದು. ಈ ಕುರಿತ ಆಯ್ಕೆಗೆ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲಾಗಿದ್ದು ಪಾರದರ್ಶಕವಾಗಿ ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಗಳಿಗೆ ಸುವರ್ಣ ಕರ್ನಾಟಕ ಪರಿಷತ್ತಿನ ಪುರಸ್ಕಾರ ಎಂದು ಹೆಸರಿಡಲು ತೀರ್ಮಾನಿಸಲಾಗಿದೆ ಎಂದರು. 'ಕನ್ನಡದ ಮಠ' ಎಂದೇ ಹೆಸರಾಗಿರುವ ಭಾಲ್ಕಿಮಠದಲ್ಲಿ ಏಪ್ರಿಲ್‌ನಲ್ಲಿ ನಡೆಯುವ ಜಾತ್ರೋತ್ಸವ ಸಮಾರಂಭದಲ್ಲಿ ಈ ಪ್ರಶಸ್ತಿಗಳನ್ನು ಕನ್ನಡೋತ್ಸವ ದೊಂದಿಗೆ ನಡೆಸಿ ಪ್ರಶಸ್ತಿ ವಿತರಣೆ ಮಾಡಲಾಗುವುದು ಎಂದರು.

ಸಭೆ/ಸಮಾರಂಭ

ಸಾಧಕ ಮಹಿಳೆಯರಿಗೆ ಸೇವಾ ರತ್ನ ಪ್ರಶಸ್ತಿ ಪ್ರದಾನ
ಸ್ಥಳ: ಪ್ರೆಸ್ ಕ್ಲಬ್, ಬೆಂಗಳೂರು
ಸಮಯ: ಬೆಳಗ್ಗೆ 10.30 ಗಂಟೆ

ದಾಸರ ಪದಗಳ ರಸಧಾರೆ
ಸ್ಥಳ: ನಂಜನಗೂಡು ಶ್ರೀರಾಘವೇಂದ್ರ ಸ್ವಾಮಿಗಳ ಮಠ, ಪವಮಾನ ಪುರ
ಸಮಯ: ಸಂಜೆ 7.00 ಗಂಟೆ

ಭರತನಾಟ್ಯ ಪ್ರದರ್ಶನ
ಸ್ಥಳ: ನಂಜನಗೂಡು ಶ್ರೀರಾಘವೇಂದ್ರ ಸ್ವಾಮಿಗಳ ಮಠ, ಜಯನಗರ
ಸಮಯ: ಸಂಜೆ 7.30 ಗಂಟೆ

ರೈತ ಸೌರ ಶಕ್ತಿ ಮೇಳ 9 ರಂದು

ಜಿಕೆವಿಕೆ ಆವರಣದಲ್ಲಿ ಆಯೋಜನೆ | ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ನಾನಾ ಗಣ್ಯರು ಭಾಗಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನೀರಾವರಿಗೆ ಸಾಂಪ್ರದಾಯಿಕ ವಿದ್ಯುತ್ ಅವಲಂಬನೆ ಕಡಿಮೆ ಮಾಡಿ, ಸೌರಶಕ್ತಿಯ ಬಳಕೆ ಮೂಲಕ ರೈತರು ಸ್ವಾವಲಂಬನೆ ಸಾಧಿಸಬೇಕು ಎಂಬ ನಿಟ್ಟಿನಲ್ಲಿ ಸರಕಾರ ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ಮಾರ್ಚ್ 9 ರಂದು 'ರೈತ ಸೌರಶಕ್ತಿ ಮೇಳ' ಆಯೋಜಿಸಿದೆ.

ನಗರದ ಹೋಟೆಲ್ ಲಲಿತ್ ಅಶೋಕದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಇಂಧನ ಸಚಿವ ಕೆ.ಜೆ ಜಾರ್ಜ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಜೆ 4.00 ಗಂಟೆಗೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಬೆಸ್ಕಾಂ ವ್ಯಾಪ್ತಿಯಲ್ಲಿ 'ಕುಸುಮ್ ಸಿ' ಯೋಜನೆ ಹಾಗೂ ರಾಜ್ಯದ 13 ಜಿಲ್ಲೆಗಳಲ್ಲಿರುವ ವಿವಿಧ ವೋಲ್ಟೇಜ್ ವರ್ಗಗಳ ಹೊಸ ಸಬ್ ಸ್ಟೇಷನ್‌ಗಳಿಗೂ ಮುಖ್ಯಮಂತ್ರಿಯವರು ಚಾಲನೆ ನೀಡಲಿದ್ದಾರೆ. ಮೇಳದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೇರಿದಂತೆ ಹಲವು ಸಚಿವರು ಮೇಳದಲ್ಲಿ ಭಾಗಿಯಾಗಲಿದ್ದಾರೆ ಎಂದರು.

ರೈತರ ಅಗತ್ಯಕ್ಕೆ ತಕ್ಕಂತೆ ವಿದ್ಯುತ್ ಪೂರೈಸಲು ಸೌರ ಪಂಪ್‌ಸೆಟ್ ಬಳಕೆಯೇ ಪರಿಹಾರ. ಹಾಗಾಗಿ, ಈ ಬಗ್ಗೆ ರೈತರಿಗೆ ಹೆಚ್ಚಿನ ಮಾಹಿತಿ ಒದಗಿಸಲು ರೈತ ಸೌರ ಶಕ್ತಿ ಮೇಳ ಆಯೋಜಿಸಲಾಗಿದೆ. ನೀರಾವರಿಗೆ ಸಾಂಪ್ರದಾಯಿಕ ವಿದ್ಯುತ್ ಅವಲಂಬನೆ ಕಡಿಮೆ ಮಾಡಿ, ಸೌರಶಕ್ತಿಯ ಬಳಕೆ ಮೂಲಕ ರೈತರು ಸ್ವಾವಲಂಬನೆ ಸಾಧಿಸಬೇಕು. ಅದಕ್ಕಾಗಿ ನಮ್ಮ ಸರಕಾರ 'ಕುಸುಮ್ ಬಿ' ಯೋಜನೆಯ ಅನುಷ್ಠಾನಕ್ಕೆ ಒತ್ತು ನೀಡುತ್ತಿದೆ. ನವೀನ ಮಾದರಿಯ ಸೌರ ಪಂಪ್ ಸೆಟ್‌ಗಳ ಪ್ರಾತ್ಯಕ್ಷಿಕೆಯನ್ನು ನೋಡಿ, ಈ ವಿಚಾರವಾಗಿ ಇರುವ ಗೊಂದಲಗಳನ್ನು ಪರಿಹರಿಸಿಕೊಳ್ಳಲು ಮೇಳ ಅತ್ಯುತ್ತಮ ವೇದಿಕೆಯಾಗಲಿದೆ. ಸೌರ ಪಂಪ್ ಸೆಟ್‌ಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದ ರೈತರು ತಮ್ಮ ಜಮೀನುಗಳಲ್ಲಿ ಇದನ್ನು ಅಳವಡಿಸಿಕೊಳ್ಳುವಂತಾಗಬೇಕು ಎಂದರು.

ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ ಬಿಳಗಿ, ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ ರುದ್ರಪ್ಪಯ್ಯ ಇದ್ದರು.

ನಗರದ ಹೋಟೆಲ್ ಲಲಿತ್ ಅಶೋಕದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಇಂಧನ ಸಚಿವ ಕೆ.ಜೆ ಜಾರ್ಜ್ ಮಾತನಾಡಿದರು.

ಮೇಳದಲ್ಲಿ ಏನಿರುತ್ತೆ?

- ರಾಜ್ಯದ ನಾನಾ ಭಾಗಗಳಿಂದ ಬರುವ ರೈತರಿಗೆ ಸೌರ ಪಂಪ್‌ಸೆಟ್‌ಗಳ ಬಗ್ಗೆ ಮಾಹಿತಿ ನೀಡಲು ಮೇಳದಲ್ಲಿ ವ್ಯವಸ್ಥೆ ಮಾಡಲಾಗಿರುತ್ತದೆ.
- ವಿವಿಧ ಸೌರ ವಿದ್ಯುತ್ ಉತ್ಪನ್ನಗಳ ಮಳಿಗೆಗಳಿರಲಿವೆ.
- ಸೌರ ಪಂಪ್ ಸೆಟ್‌ಗಳು ಹೇಗೆ ಕೆಲಸ ಮಾಡುತ್ತವೆ ಎಂಬುದನ್ನು ನೇರವಾಗಿ ನೋಡುವ ಅವಕಾಶ ಇರುತ್ತದೆ.
- ಸೋಲಾರ್ ಪಂಪ್ ಸೆಟ್ ಅಳವಡಿಸಿಕೊಳ್ಳುವ ರೈತರಿಗಾಗಿಯೇ ಆನ್‌ಲೈನ್ ಪೋರ್ಟಲ್ ವಿನ್ಯಾಸಗೊಳಿಸಲಾಗಿದೆ.
- ಮೇಳದಲ್ಲಿ ಸೌರ ಮಿತ್ರ ಆ್ಯಪ್ ಬಿಡುಗಡೆ ಮಾಡಲಾಗಿತ್ತದೆ. ಆ್ಯಪ್ ಮೂಲಕವೂ ರೈತರು ಅರ್ಜಿ ಸಲ್ಲಿಸಬಹುದಾಗಿದೆ.
- ರೈತರಿಗಾಗಿ ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿದೆ.
- ಸೌರ ಪಂಪ್ ಸೆಟ್‌ಗಳ ಉತ್ಪಾದಕರು, ಮಾರಾಟಗಾರರು, ಬ್ಯಾಂಕ್ ಅಧಿಕಾರಿಗಳು, ಕೃಷಿ ಹಾಗೂ ಇಂಧನ ಇಲಾಖೆಯ ಅಧಿಕಾರಿಗಳು ಸಂವಾದದಲ್ಲಿ ಪಾಲ್ಗೊಂಡು ರೈತರಿಗೆ ಮಾಹಿತಿ ಒದಗಿಸಲಿದ್ದಾರೆ.

ಹೆಚ್ಚಿನ ಪ್ರಮಾಣದಲ್ಲಿ ಸೌರ ಪಂಪ್ ಸೆಟ್ ಅಳವಡಿಕೆಯನ್ನು ರೈತರ ಸಮೂಹಗಳಲ್ಲಿ ಉತ್ತೇಜಿಸಲು ರಾಜ್ಯ ಸರಕಾರದಿಂದ ಈವರೆಗೆ ನೀಡಲಾಗುತ್ತಿದ್ದ ಶೇ.30 ರಷ್ಟು ಸಹಾಯಧನವನ್ನು ಶೇ.50 ಕ್ಕೆ ಹೆಚ್ಚಿಸಿದೆ. ಒಟ್ಟಾರೆ ಮೊತ್ತದಲ್ಲಿ ಶೇ. 20 ರಷ್ಟನ್ನು ಮಾತ್ರ ರೈತರು ಭರಿಸಬೇಕಾಗಿರುತ್ತದೆ. ಇದಲ್ಲದೇ, ಯೋಜನೆಯಡಿ ರೈತರಿಗೆ ಪಂಪ್, ಮೀಟರ್ ,ಪೈಪ್‌ಗಳನ್ನು ಒದಗಿಸಲಿದೆ.
-ಕೆ.ಜೆ ಜಾರ್ಜ್ ಇಂಧನ ಸಚಿವ

ಐಎಎಸ್ ಮನೆಯಲ್ಲಿ ಬಾಡಿಗೆಗಿದ್ದ ಪಾಕಿಸ್ತಾನದ ಪ್ರೇಮಿ ಮುನಾವರ್

ಬೆಂಗಳೂರು: ರಾಜ್ಯಸಭೆ ಚುನಾವಣೆಯಲ್ಲಿ ನಾಸೀರ್ ಹುಸೇನ್ ಗೆಲುವಿನ ಬಳಿಕ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿ ಬಂಧಿತನಾಗಿರುವ ಆರೋಪಿ ಮುನಾವರ್ ಅಹಮದ್ ಐಎಎಸ್ ಅಧಿಕಾರಿಯ ಮನೆಯಲ್ಲಿ ಬಾಡಿಗೆಗೆ ಇರುವುದು ತನಿಖೆಯಲ್ಲಿ ಪತ್ತೆಯಾಗಿದೆ.

ಪ್ರತಿಷ್ಠಿತ ಪ್ರದೇಶಗಳಲ್ಲಿ ಒಂದಾಗಿರುವ ಜಯಮಹಲ್ 1ನೇ ಕ್ರಾಸ್‌ನ ನಂಬರ್ 27ಸಿ ನಂಬರ್‌ನ ಮನೆಯಲ್ಲಿ ಆರೋಪಿ ಮುನಾವರ್ ಕುಟುಂಬದೊಂದಿಗೆ ವಾಸವಾಗಿದ್ದ. ಮುನಾವರ್ ನೆಲೆಸಿದ್ದ ಮನೆ